4624654
25/8/2022

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2022-23 ನೇ ಸಾಲಿನ ಸ್ನಾತಕ/ಸ್ನಾತಕೋತ್ತರ ಶೈಕ್ಷಣಿಕಾ ವೇಳಾಪಟ್ಟಿ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ:ಇಡಿ 217 ಯುಎನ್ಇ 2022, ದಿನಾಂಕ:09.02.2022.
2. ಉಪಾಧ್ಯಕ್ಷರು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ರವರ ಪತ್ರದ ದಿನಾಂಕ: 16.08.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ (1) ದಿನಾಂಕ:09.02.2022 ರ ಆದೇಶದಲ್ಲಿ 2022-23ನೇ ಶೈಕ್ಷಣಿಕ ಸಾಲಿನ ಸ್ನಾತಕ/ಸ್ನಾತಕೋತ್ತರ ಶೈಕ್ಷಣಿಕ ವೇಳಾಪಟ್ಟಿಯನ್ನು ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ ಅನುದಾನ/ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಜಾರಿಗೊಳಿಸುವಂತೆ ಆದೇಶವನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (2) ದಿನಾಂಕ:16.08.2022 ರ ಪತ್ರದಲ್ಲಿ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ರವರು ರಾಜ್ಯದಲ್ಲಿ ಪ್ರಸ್ತುತ ದ್ವಿತೀಯ ಪದವಿ ಪೂರ್ವದ ಪೂರಕ ಪರೀಕ್ಷೆಗಳು ನಡೆಯುತ್ತಿದ್ದು, ಪರೀಕ್ಷೆ ಮುಕ್ತಾಯಗೊಂಡ ಕೆಲವು ದಿನಗಳಲ್ಲಿ ಫಲಿತಾಂಶ ಪ್ರಕಟಗೊಳ್ಳುವ ಕಾರಣ, ಪದವಿ ಪೂರ್ವ ಪರೀಕ್ಷೆಯಲ್ಲಿ ಈಗಾಗಲೇ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಹಾಗೂ ಪೂರಕ ಪರೀಕ್ಷೆಯ ಫಲಿತಾಂಶದ ನಿರೀಕ್ಷಣೆಯಲ್ಲಿರುವ ವಿದ್ಯಾರ್ಥಿಗಳ ಪದವಿ ವಿದ್ಯಾಭ್ಯಾಸದ ಹಿತದೃಷ್ಟಿಯಿಂದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ತರಗತಿಗಳನ್ನು ಪ್ರಾರಂಭಿಸುವ ಹಾಗೂ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಈ ಹಿಂದೆ ಓದಲಾದ (1)ರ ಆದೇಶದಲ್ಲಿ ನಿಗಧಿಪಡಿಸಿರುವುದನ್ನು ಪರಿಷ್ಕರಿಸಬೇಕಾಗಿದೆ.

6/9/22

ಮೇಲೆ ವಿವರಿಸಿರುವ ಕಾರಣಗಳಿಂದಾಗಿ 2022-23ನೇ ಸಾಲಿನ ಸ್ನಾತಕ ತರಗತಿಗಳನ್ನು 1ನೇ ಸೆಪ್ಟೆಂಬರ್ 2022ರಿಂದಲೇ ಪ್ರಾರಂಭ ಆಗುವಂತೆ ಮತ್ತು ಪದವಿ ಕಾಲೇಜುಗಳಲ್ಲಿನ ಪ್ರವೇಶಾತಿ ಪ್ರಕ್ರಿಯೆಯನ್ನು ಸಪ್ಟೆಂಬರ್ 30ರೊಳಗಾಗಿ ಮಾತ್ರ ವಿಸ್ತರಿಸುವಂತೆ ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಪದವಿ ಕಾಲೇಜುಗಳಿಗೆ ಸೂಕ್ತ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಅದರನ್ವಯ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಇವರು ನೀಡಿರುವ ವರದಿಯನ್ನು ಮೇಲಿನ ಅಂಶಗಳೊಂದಿಗೆ ಪರಿಶೀಲಿಸಲಾಗಿ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಇಡಿ/ 217/ಯುಎನ್ಇ/2022,</u>**
**<u>ಬೆಂಗಳೂರು, ದಿನಾಂಕ: 17-08-2022.</u>**

ಮೇಲ ಪ್ರಸ್ತಾವನೆಯಲ್ಲಿ ಕೂಲಂಕಷವಾಗಿ ವಿವರಿಸಿದಂತೆ, ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ ಅನುದಾನ/ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) 2022-23ನೇ ಸಾಲಿನ ಸ್ನಾತಕ ತರಗತಿಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 1ನೇ ಸೆಪ್ಟೆಂಬರ್ 2022 ರಿಂದ ಪ್ರಾರಂಭ ಆಗುವಂತೆ ಮತ್ತು ಪದವಿ ಕಾಲೇಜುಗಳಲ್ಲಿನ ಪ್ರವೇಶಾತಿ ಪ್ರಕ್ರಿಯೆಯನ್ನು 15 ಸಪ್ಟೆಂಬರ್ ರವರೆಗೆ ವಿಸ್ತರಿಸಿ ಆದೇಶಿಸಿದೆ.

...2

ಮುಂದುವರೆದು ದ್ವಿತೀಯ ಪದವಿ ಪೂರ್ವ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ದಂಡರಹಿತವಾಗಿ ಪೂರಕ ಪರೀಕ್ಷೆಯ ಫಲಿತಾಂಶ ಘೋಷಣೆ ಆಗುವ ದಿನಾಂಕದಿಂದ ಒಂದು ವಾರದೊಳಗೆ ಪ್ರವೇಶಾತಿ ಪಡೆಯಲು ಅವಕಾಶವನ್ನು ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್.ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1)

ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಕಾಶಿಇ/ಶೈವಿ/04/ಸುತ್ತೋಲೆ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ ಶೇಷಾದ್ರಿ ರಸ್ತೆ
ಬೆಂಗಳೂರು, ದಿನಾಂಕ:01-09-2022

ಮೇಲ್ಕಂಡ ಸರ್ಕಾರದ ಸುತ್ತೋಲೆಯನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಯನ್ನು:

1. ಇಲಾಖಾ ವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಅಗತ್ಯ ಕ್ರಮಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು ಕೇಂದ್ರ ಕಛೇರಿ-ಇಲಾಖಾ ವೆಬ್ ಸೈಟನಲ್ಲಿ ಪ್ರಕಟಿಸಲು.
3. ಕಛೇರಿ ಪ್ರತಿ